ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ನೇಮಕ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

23 (175) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ವೈದ್ಯರುಗಳನ್ನು ನೇಮಕಾತಿ ಮಾಡಲು ಸರ್ಕಾರ ಕೈಗೊಂಡಕ್ರಮಗಳೇನು;

(ಇ) ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳನ್ನು (ಚರ್ಮ, ಮೂಳೆ ಸ್ತ್ರೀ ರೋಗ ಮುಂತಾದ) ನೇಮಕ ಮಾಡಲಾಗಿದೆಯೇ; ಮಾಡದಿದ್ದರೆ, ಯಾವ ಅವಧಿಯಲ್ಲಿ ನೇಮಕ ಮಾಡಿಕೊಳ್ಳಲಾಗುವುದು?